## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭಾ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 251 (249) |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 09-12-2025 |

*****

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಜವಳಿ ಉದ್ಯಮದ ಸ್ಥಿತಿಗತಿಗಳ ಬಗ್ಗೆ ಸರ್ಕಾರ ಅಧ್ಯಯನ ನಡೆಸಿದೆಯೇ; | ರಾಜ್ಯದಲ್ಲಿ ನೂತನ ಜವಳಿ ಹಾಗೂ ಸಿದ್ಧಉಡುಪು ನೀತಿ 2019-24 ರಡಿ ಜವಳಿ ಘಟಕಗಳಿಗೆ ನೀಡಿರುವ ಸಹಾಯಧನದ ಬಗ್ಗೆ ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ (ಕೆ.ಎಂ.ಇ.ಎ) ರವರಿಂದ ಅಧ್ಯಯನ ನಡೆಸಲು ಕ್ರಮವಹಿಸಲಾಗಿದೆ. |
| (ಆ) | ರಾಜ್ಯದಲ್ಲಿ ಪ್ರಸ್ತುತ ಇರುವ ಜವಳಿ ನೀತಿಗಳಾವುವು; ಹೊರ ದೇಶದ ಉದ್ಯಮಿಗಳನ್ನು ಕರ್ನಾಟಕ್ಕೆ ಸೆಳೆಯಲು ಕೈಗೊಂಡಿರುವ ಕ್ರಮಗಳೇನು; | ರಾಜ್ಯದಲ್ಲಿ ಪ್ರಸ್ತುತ ನೂತನ ಜವಳಿ ಹಾಗೂ ಸಿದ್ಧಉಡುಪು ನೀತಿ 2019-24 ಚಾಲ್ತಿಯಲ್ಲಿರುತ್ತದೆ.<br>ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿ 2019-24 ರಡಿ ಹೊರದೇಶದ ಉದ್ಯಮಿಗಳನ್ನು ಕರ್ನಾಟಕಕ್ಕೆ ಸೆಳೆಯಲು ಭಾರತ ಸರ್ಕಾರ, ಜವಳಿ ಮಂತ್ರಾಲಯದಿಂದ ಆಯೋಜಿಸಲಾಗುವ Bharat Tex ಹಾಗೂ Viksit Bharat: Global Summit on Technical Textiles ಈ ಜಾಗತಿಕ ಸಮಾವೇಶಗಳಲ್ಲಿ ಕರ್ನಾಟಕ ರಾಜ್ಯವು ಭಾಗವಹಿಸಿ, ಇಲಾಖೆಯ ಕಾರ್ಯಕ್ರಮಗಳನ್ನು ಪ್ರಚುರಪಡಿಸಲಾಗುತ್ತಿದೆ. |
| (ಇ) | ಇತರೆ ರಾಜ್ಯಗಳು ಹೊರ ದೇಶದ ಉದ್ಯಮಿಗಳಿಗೆ ಮತ್ತು ಸ್ಥಳೀಯ ನೇಕಾರರಿಗೆ ನೀಡುತ್ತಿರುವ ಸವಲತ್ತುಗಳನ್ನು ರಾಜ್ಯ ಸರ್ಕಾರವು ನೀಡಲು ಮುಂದಾಗುವುದೇ? | ಹೌದು.<br>ರಾಜ್ಯದಲ್ಲಿ ಹೂಡಿಕೆ ಮಾಡುವ MSME ಮತ್ತು Large ಜವಳಿ ಘಟಕಗಳಿಗೆ ನೂತನ ಜವಳಿ ಹಾಗೂ ಸಿದ್ಧಉಡುಪು ನೀತಿ 2019-24 ರಡಿ ಸಾಲಾಧಾರಿತ ಬಂಡವಾಳ ಸಹಾಯಧನ, ಬಡ್ಡಿ ಸಹಾಯಧನ, ಇ.ಎಸ್.ಐ ಮತ್ತು ಇ.ಪಿ.ಎಫ್ ಮರುಪಾವತಿ ಸಹಾಯಧನ, ವಿದ್ಯುತ್ ಸಹಾಯಧನ ಹಾಗೂ ಇತರೆ ಸಹಾಯಧನಗಳನ್ನು ನೀಡಲಾಗುತ್ತಿದೆ ಹಾಗೂ ಮೆಗಾ ಘಟಕಗಳಿಗೆ case to case basis ಮಾದರಿಯಲ್ಲಿ ಸಹಾಯಧನಗಳನ್ನು ನೀಡಲಾಗುತ್ತಿದೆ.<br>ರಾಜ್ಯದ ಸ್ಥಳೀಯ ನೇಕಾರರಿಗೆ ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br>**ಕೈಮಗ್ಗ ಯೋಜನೆಗಳು:-**<br>• ನೇಕಾರರ ಸಮ್ಮಾನ್ ಯೋಜನೆಯಡಿ ಕೈಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡುವುದು.<br>• ಕೈಮಗ್ಗ ವಿಕಾಸ ಯೋಜನೆಯಡಿ ಹೊಸ ಕೈಮಗ್ಗ ಹಾಗೂ ಅಗತ್ಯ ಸಲಕರಣೆಗಳನ್ನು ಖರೀದಿಸಲು ಘಟಕ ವೆಚ್ಚದ ಶೇಕಡ |

...2

| | | |
|---|---|---|
| | | 50 ರಷ್ಟು ಸಹಾಯಧನ ಒದಗಿಸುವುದು.<br>• ಕೈಮಗ್ಗಗಳಿಗೆ ಮೋಟರೈಸ್ಡ್ ಜಕಾರ್ಡ್ ಸಲಕರಣೆಗಳ ಕಿಟ್ ಒದಗಿಸಲು ಪ್ರತಿ ಘಟಕಕ್ಕೆ ವೆಚ್ಚವಾಗುವ ಮೊತ್ತಕ್ಕೆ ಸರ್ಕಾರದ ವತಿಯಿಂದ ಸಾಮಾನ್ಯ ವರ್ಗದವರಿಗೆ ಶೇ.50 ರಷ್ಟು ಸಹಾಯಧನ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶೇ.90 ರಷ್ಟು ಸಹಾಯಧನವನ್ನು ಒದಗಿಸುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೂನ್ಯ ಹಾಗೂ ಶೇ.1 ಬಡ್ಡಿ ದರದಲ್ಲಿ ರೂ.2.00 ಲಕ್ಷಗಳವರೆಗೆ, ಶೇ.3 ರ ಬಡ್ಡಿದರದಲ್ಲಿ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳವರೆಗೆ ಸಾಲ ನೀಡಲಾಗುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್ / ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೇ.8 ರಷ್ಟು ಬಡ್ಡಿ ಸಹಾಯಧನ ನೀಡಲಾಗುವುದು.<br>• ಕೈಮಗ್ಗ ನೇಕಾರರ ಸಹಕಾರ ಸಂಘಗಳು ತಮ್ಮ ಕೈಮಗ್ಗ ಉತ್ಪನ್ನಗಳ ಮಾರಾಟ ಮೇಲೆ ರಾಜ್ಯ ಸರ್ಕಾರದಿಂದ ಶೇ.20 ರಿಬೇಟ್ ಅನ್ನು ಮರು ಸಂದಾಯ ಪಾವತಿಸಲಾಗುತ್ತಿದೆ.<br>• ಕಚ್ಚಾ ಮಾಲು ಖರೀದಿ ಮೇಲೆ ಕೈಮಗ್ಗ ಸಹಕಾರ ಸಂಘಗಳಿಗೆ ಪ್ರತಿ ಕೆ.ಜಿಗೆ ರೂ.15/– ರ ಸಹಾಯಧನ ನೀಡುವುದು.<br>• ಮಿತವ್ಯಯ ನಿಧಿ ಯೋಜನೆಯಡಿ ನೇಕಾರರ ಮಜೂರಿಯಿಂದ ಶೇ.8 ನ್ನು ಕಟಾಯಿಸಿ ರಾಜ್ಯ ಸರ್ಕಾರದ ಶೇ.8 ರ ಸಮಚಂದಾ ಸೇರಿಸಿ ಖಜಾನೆಯಲ್ಲಿ ಜಮಾ ಮಾಡಲಾಗುವುದು ಜಮೆಯಾದ ಮೊತ್ತಕ್ಕೆ ಶೇ.12 ರ ಬಡ್ಡಿಯನ್ನು ನೀಡಲಾಗುವುದು.<br>• ಸಾಮಾನ್ಯ ಸೌಲಭ್ಯ ಕೇಂದ್ರ ನಿರ್ಮಾಣಕ್ಕಾಗಿ ಸರ್ಕಾರದಿಂದ ಯೋಜನಾ ವೆಚ್ಚದ ಶೇ.80 ರಷ್ಟು ಅನುದಾನ ನೀಡಲಾಗುವುದು.<br>• ಕೈಮಗ್ಗ ನೇಕಾರರ ಸಹಕಾರ ಸಂಘಗಳಿಗೆ ಹಿಂದಿನ 3 ವರ್ಷಗಳ ಸರಾಸರಿ ವಹಿವಾಟಿನ ಮೇಲೆ ಶೇ.50 ರಷ್ಟನ್ನು ಅಥವಾ ರೂ.5.00 ಲಕ್ಷಗಳ ಗರಿಷ್ಠ ಮಿತಿಗೆ ಒಳಪಟ್ಟು ಒಂದಾವರ್ತಿ ಪ್ರೋತ್ಸಾಹಧನ ನೀಡಲಾಗುವುದು.<br>• ಉಣ್ಣೆ ವಲಯ ಪುನಃಶ್ಚೇತನ ಮತ್ತು ಬಲವರ್ಧನೆ ಯೋಜನೆಯಡಿ ಸಹಾಯಧನ.<br>ರಾಜ್ಯದ ಕೈಮಗ್ಗ ನೇಕಾರರ ಕೈಮಗ್ಗ ಉತ್ಪನ್ನಗಳನ್ನು ಪ್ರೋತ್ಸಾಹಿಸಲು ಹಾಗೂ ಬೆಂಬಲ ನೀಡಲು ರೇಷ್ಮೆ, ಹತ್ತಿ ಮತ್ತು ಉಣ್ಣೆ ಕ್ಷೇತ್ರ/ ವಲಯದಲ್ಲಿ ಕೈಮಗ್ಗ ನೇಕಾರರು ಹೊಂದಿರುವ ನೈಪುಣ್ಯತೆ/ಶ್ರೇಷ್ಠತೆ/ತಾಂತ್ರಿಕತೆ / ಉತ್ಕೃಷ್ಟತೆಗಾಗಿ ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಲಾಗುತ್ತಿದೆ. |

...3

- ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ಕಾರ್ಯಕ್ರಮ (NHDP) ದಡಿ ಕೈಮಗ್ಗ ನೇಕಾರರಿಗೆ ಮುದ್ರಾ ಯೋಜನೆಯಡಿ ಸಾಲ ಸೌಲಭ್ಯ
- ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಡಿ ನೋಂದಾಯಿತ ನೇಕಾರರಿಗೆ ಕಚ್ಚಾನೂಲನ್ನು ಒದಗಿಸಿ ಅವರು ಉತ್ಪಾಸಿದ ಬಟ್ಟೆಗಳನ್ನು ಸ್ವೀಕರಿಸಿ ಪರಿವರ್ತನಾ ಶುಲ್ಕವನ್ನು ಒದಗಿಸಲಾಗುತ್ತಿದೆ.

<u>ವಿದ್ಯುತ್ ಮಗ್ಗ ಯೋಜನೆಗಳು:-</u>

- ನೇಕಾರರ ಸಮ್ಮಾನ್ ಯೋಜನೆಯಡಿ ವಿದ್ಯುತ್ ಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡುವುದು.
- ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ
- 02 ವಿದ್ಯುತ್ ಮಗ್ಗ ಖರೀದಿಗೆ ಸಹಾಯಧನ.
- ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗೆ ಸಹಾಯಧನ.
- ವಿದ್ಯುತ್ ರಿಯಾಯಿತಿ ಸಹಾಯಧನ – 01 ರಿಂದ 10 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಉಚಿತವಾಗಿ ವಿದ್ಯುತ್ ಪೂರೈಸಿ ಶೂನ್ಯ ಬಿಲ್ ನೀಡಲಾಗುತ್ತಿದೆ ಹಾಗೂ 10.01 ರಿಂದ 20 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವಘಟಕಗಳಿಗೆ ಬಳಸಿದ ಒಟ್ಟು ಯೂನಿಟ್‌ಗಳಿಗೆ ಪ್ರತಿ ಯೂನಿಟ್‌ಗೆ ರೂ.1.25 ರಂತೆ ವಿದ್ಯುತ್ಶುಲ್ಕವನ್ನು (Energy Charges) ಘಟಕದವರು ಪಾವತಿಸುವುದು. ಬಾಕಿ ಉಳಿಯುವ ವಿದ್ಯುತ್ ಶುಲ್ಕದ ಮೊತ್ತವನ್ನು ಮಾತ್ರ ಸರ್ಕಾರದ ಬೊಕ್ಕಸದಿಂದ ಭರಿಸಲಾಗುತ್ತಿದೆ.
- ಸೈಜಿಂಗ್ ಘಟಕ ಸ್ಥಾಪನೆಗೆ ಸಹಾಯಧನ
- ಮಿನಿ ಪವರ್‌ಲೂಮ್ ಸ್ಥಾಪನೆಗೆ ಸಹಾಯಧನ
- ಪ್ರೊಸೆಸ್ಸಿಂಗ್ ಘಟಕ ಸ್ಥಾಪನೆಗೆ ಸಹಾಯಧನ
- 20 ಹೆಚ್.ಪಿಇಂದ 200 ಹೆಚ್.ಪಿವರೆಗಿನ ವಿದ್ಯುತ್ ಸಂಪರ್ಕಹೊಂದಿರುವ SCSP / TSP ವಿದ್ಯುತ್ ಮಗ್ಗ ಘಟಕಗಳಿಗೆ Energy Charges ನಲ್ಲಿ ಶೇ.50 ರಷ್ಟು ವಿದ್ಯುತ್ ಸಹಾಯಧನ ಒದಗಿಸಲಾಗುವುದು.
- ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ರಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಂ.ಇ) ಘಟಕಗಳ ಸ್ಥಾಪನೆಗೆ ಸಹಾಯಧನ.

**ಸಂಖ್ಯೆ: CI 260 JAKE 2025**

(ಶಿವಾನಂದ ಎಸ್. ಪಾಟೀಲ)

ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು